# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಏಡ್ಸ್ ಸೋಂಕಿತ ವ್ಯಕ್ತಿಗಳ ಆಶ್ರಯಧಾಮ ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯಾನುಧಾನವನ್ನು ನೀಡುವ ಬಗ್ಗೆ.

ಓದಲಾಗಿದೆ: 1) ಮಾನ್ಯ ಮುಖ್ಯ ಮಂತ್ರಿಯವರ 2016-17ನೇ ಸಾಲಿನ ಆಯವ್ಯಯ ಘೋಷಣೆ

2) ದಿನಾಂಕ:22.09.2015 ರಂದು ನಡೆದ ಕ್ರಿಶ್ಚಿಯನ್ ಅಭಿವೃದ್ಧಿ ಮುಖ್ಯ ಸಮಿತಿಯ ಸಭಾ ನಡವಳಿಗಳು

3) ದಿನಾಂಕ:14.10.2015 ರಂದು ನಡೆದ ಕ್ರಿಶ್ಚಿಯನ್ ಅಭಿವೃದ್ಧಿ ಸಮಿತಿ ಉಪಸಮಿತಿ ಸಭೆಯ ಸಭಾ ನಡವಳಿಗಳು.

4) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 320 ಎಂಡಿಎಸ್ 2011, ದಿನಾಂಕ:16.01.2012

5) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 307 ಎಂಡಿಎಸ್ 2014, ದಿನಾಂಕ:26.08.2014

******

<u>ಪ್ರಸ್ತಾವನೆ:</u>

ಮೇಲೆ (1)ರಲ್ಲಿ ಓದಲಾದ ಮಾನ್ಯ ಮುಖ್ಯ ಮಂತ್ರಿಯವರ 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ (ಕಂಡಿಕೆ-214) ಈ ಕೆಳಕಂಡಂತೆ ಘೋಷಿಸಲಾಗಿದೆ.

> "ಏಡ್ಸ್ ರೋಗಿಗಳು ಮತ್ತು ವಿಕಲಚೇತನ ವ್ಯಕ್ತಿಗಳ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಅಲ್ಪಸಂಖ್ಯಾತರ ಸಂಸ್ಥೆಗಳಿಗೆ ಹಣಕಾಸಿನ ನೆರವನ್ನು ಒದಗಿಲಾಗುವುದು."

ಮೇಲೆ (2) ರಲ್ಲಿ ಓದಲಾದ ಸಭೆಯ ತೀರ್ಮಾನದಂತೆ, ಮೇಲೆ (3) ರಲ್ಲಿ ಓದಲಾದ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯ ಉಪ ಸಮಿತಿ ಸಭೆಯಲ್ಲಿ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಏಡ್ಸ್ ಸೋಂಕಿತ ವ್ಯಕ್ತಿಗಳ ಆಶ್ರಯಧಾಮ ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯಾನುಧಾನವನ್ನು ನೀಡುವ ಬಗ್ಗೆ ಸೂಕ್ತ ಆದೇಶವನ್ನು ಹೊರಡಿಸುವಂತೆ ಸೂಚಿಸಲಾಗಿದೆ.

ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳಿಗೆ ನೀಡಲಾಗುವ ಸಹಾಯಾನುಧಾನದ ಮಾದರಿಯಲ್ಲಿಯೇ ಈ ಸಹಾಯಾನುಧಾನವನ್ನು ನೀಡಲು ಸೂಕ್ತ ಆದೇಶ ಹೊರಡಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಮೇಲೆ (2) ಮತ್ತು (3) ರಲ್ಲಿನ ಸಭೆಗಳಲ್ಲಿ ತೀರ್ಮಾನಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ಸರ್ಕಾರದ ಆದೇಶಗಳನ್ವಯ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳಿಗೆ ಸಂಬಂಧಿಸಿದಂತೆ ಸಹಾಯಾನುಧಾನದ ಸಂಹಿತೆಯನ್ನು ಹಾಗೂ ಈ ಸಂಹಿತೆಗೆ ಮೇಲೆ (5) ರಲ್ಲಿ ಓದಲಾದ ಆದೇಶದಲ್ಲಿ ತಿದ್ದುಪಡಿಯನ್ನು ಮಾಡಲಾಗಿದೆ.

..2.

ಅದರಂತೆ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಏಡ್ಸ್ ಸೋಂಕಿತ ವ್ಯಕ್ತಿಗಳ ಆಶ್ರಯಧಾಮ ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯಾನುಧಾನವನ್ನು ನೀಡುವ ಬಗ್ಗೆ ಕೂಲಂಕೂಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 39 MDS 2016, ಬೆಂಗಳೂರು**
**ದಿನಾಂಕ:04.01.2017**

ಮೇಲೆ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದಲ್ಲಿ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಕ್ರಿಶ್ಚಿಯನ್ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ನಡೆಸಲಾಗುವ ಏಡ್ಸ್ ಸೋಂಕಿತ ವ್ಯಕ್ತಿಗಳ ಆಶ್ರಯಧಾಮ ಮತ್ತು ಮಾನಸಿಕ ಹಾಗೂ ದೈಹಿಕ ವಿಕಲಚೇತನರ ಆಶ್ರಯಧಾಮಗಳಿಗೆ ಸಹಾಯಾನುಧಾನವನ್ನು ಮಂಜೂರು ಮಾಡುವ ಬಗ್ಗೆ ಈ ಯೋಜನೆಯನ್ನು ಜಾರಿಗೆ ತರಲು ಈ ಆದೇಶದೊಂದಿಗೆ **"ಅನುಬಂಧ-ಎ"** ರಲ್ಲಿ ಲಗತ್ತಿಸಿರುವ ಮಾರ್ಗಸೂಚಿಗಳೊಂದಿಗೆ ಹಾಗೂ **"ಅನುಬಂಧ-ಬಿ"** ರಲ್ಲಿ ತಿಳಿಸಿರುವಂತೆ ಆವರ್ತಕ ಮತ್ತು ಅನಾವರ್ತಕ ವೆಚ್ಚವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

ಈ ಮಾರ್ಗಸೂಚಿಗಳು ತಕ್ಷಣದಿಂದ ಜಾರಿಗೆ ಬರುತ್ತವೆ. ಈ ಯೋಜನೆಗೆ ತಗಲುವ ವೆಚ್ಚವನ್ನು **2016-17ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ-2225-03-102-0-14 (059) "ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆ"**ಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 187 ವೆಚ್ಚ-3/2016, ದಿನಾಂಕ:29.03.2016ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ. ನಾಗರತ್ನ 4/1/17
**(ಎಂ.ನಾಗರತ್ನ)**
ಸರ್ಕಾರದ ಜಂಟಿ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರು ಹಾಗೂ ಅಧ್ಯಕ್ಷರು ಕರ್ನಾಟಕ ಕ್ರಿಶ್ಚಿಯನ್ ಅಭಿವೃದ್ಧಿ ಸಮಿತಿ, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
7) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿ,

..3.